# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 6ನೇ ರಾಜ್ಯ ವೇತನ ಆಯೋಗದ 2ನೇ ಸಂಪುಟದ ವರದಿಯಲ್ಲಿನ ಕೆಲವು ಶಿಫಾರಸ್ಸುಗಳನ್ನು ಪರಿಶೀಲಿಸಲು ಅಧಿಕಾರಿ ಸಮಿತಿಯ ರಚನೆ ಕುರಿತು.

**ಓದಲಾಗಿದೆ:**

1. ದಿನಾಂಕ: 01.6.2017ರ ಆದೇಶ ಸಂಖ್ಯೆ: ಆಇ 22 ಎಸ್‌ಆರ್‌ಪಿ 2017.
2. ದಿನಾಂಕ: 15-06-2017ರ ಸೇರ್ಪಡೆ ಆದೇಶ ಸಂಖ್ಯೆ: ಆಇ 22 ಎಸ್‌ಆರ್‌ಪಿ 2017.
3. ದಿನಾಂಕ: 01-3-2018ರ ಆದೇಶ ಸಂಖ್ಯೆ: ಆಇ 06 ಎಸ್‌ಆರ್‌ಪಿ 2018.
4. ದಿನಾಂಕ: 19-04-2018ರ ಸರ್ಕಾರಿ ಅಧಿಸೂಚನೆ ಸಂಖ್ಯೆ: ಎಫ್‌ಡಿ 6 ಎಸ್‌ಆರ್‌ಪಿ 2018.
5. ದಿನಾಂಕ: 19-04-2018ರ ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 6 ಎಸ್‌ಆರ್‌ಪಿ 2018.
6. ದಿನಾಂಕ: 11.01.2019ರ ಸರ್ಕಾರಿ ಆದೇಶ ಸಂಖ್ಯೆ:ಆಇ 24 ಎಸ್‌ಆರ್‌ಪಿ 2018 (I) ರಿಂದ (XI).
7. ದಿನಾಂಕ: 11-01-2019ರ ಸರ್ಕಾರಿ ಆದೇಶ ಸಂಖ್ಯೆ: ಆಇ 1 ಸೇನಿಸೇ 2019.
8. ದಿನಾಂಕ: 11-01-2019ರ ಸರ್ಕಾರಿ ಆದೇಶ ಸಂಖ್ಯೆ: ಆಇ 2 ಸೇನಿಸೇ 2019.
9. ದಿನಾಂಕ: 28-05-2019ರ ಸರ್ಕಾರಿ ಆದೇಶ ಸಂಖ್ಯೆ: ಆಇ 24 ಎಸ್‌ಆರ್‌ಪಿ 2018 (XII) ರಿಂದ (XIV).

**ಪ್ರಸ್ತಾವನೆ:**

ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳನ್ನು ಪರಿಷ್ಕರಿಸಿ ನೂತನ ವೇತನ ಶ್ರೇಣಿ ರಚನೆಯನ್ನು ರೂಪಿಸಲು ಹಾಗೂ ಇತರೆ ಸೇವಾ ಷರತ್ತುಗಳನ್ನು ಪರಿಷ್ಕರಿಸುವಲ್ಲಿ ಸರ್ಕಾರಕ್ಕೆ ಸೂಕ್ತ ಶಿಫಾರಸ್ಸು ಮಾಡಲು ಮೇಲೆ (1)ರಲ್ಲಿ ಓದಲಾದ ದಿನಾಂಕ: 01-06-2017ರ ಸರ್ಕಾರಿ ಆದೇಶದಲ್ಲಿ 6ನೇ ರಾಜ್ಯ ವೇತನ ಆಯೋಗವನ್ನು ರಚಿಸಿ ಆದೇಶವನ್ನು ಹೊರಡಿಸಲಾಗಿತ್ತು. ತದನಂತರದಲ್ಲಿ, ಮೇಲೆ (2)ರಲ್ಲಿ ಓದಲಾದ ದಿನಾಂಕ: 15-06-2017ರ ಸೇರ್ಪಡೆ ಆದೇಶದಲ್ಲಿ ಆಯೋಗದ ಪರಿಶೀಲನಾರ್ಹ ಅಂಶಗಳಿಗೆ ಕೆಲವು ಸೇರ್ಪಡೆಗಳನ್ನು ಮಾಡಲಾಗಿರುತ್ತದೆ.

ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳನ್ನು ಪರಿಷ್ಕರಿಸುವ ಕುರಿತಂತೆ, 6ನೇ ರಾಜ್ಯ ವೇತನ ಆಯೋಗವು ತನ್ನ ವರದಿಯ ಮೊದಲನೇ ಸಂಪುಟವನ್ನು ದಿನಾಂಕ: 31-01-2018ರಂದು ಸರ್ಕಾರಕ್ಕೆ ಸಲ್ಲಿಸಿದ್ದು, ಆಯೋಗದ ಶಿಫಾರಸ್ಸಿನಂತೆ ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳನ್ನು ಮೇಲೆ (3) ರಿಂದ (5)ರಲ್ಲಿ ಓದಲಾದ ಆದೇಶಗಳಲ್ಲಿ ಪರಿಷ್ಕರಿಸಿ ಆದೇಶಗಳನ್ನು ಹೊರಡಿಸಲಾಗಿರುತ್ತದೆ.

ಆಯೋಗವು ದಿನಾಂಕ: 30-04-2018ರಂದು ಸರ್ಕಾರಕ್ಕೆ ಸಲ್ಲಿಸಿದ ವರದಿಯ 2ನೇ ಸಂಪುಟದಲ್ಲಿ, ರಾಜ್ಯ ಸರ್ಕಾರಿ ನೌಕರರ ಹಾಗೂ ಸರ್ಕಾರದ ವಿವಿಧ ಇಲಾಖೆಗಳ ಕಾರ್ಯಕ್ಷಮತೆ ಉತ್ತಮಪಡಿಸುವ ಹಾಗೂ ಹಲವಾರು ವೃಂದಗಳ ವೇತನ ಶ್ರೇಣಿಗಳನ್ನು ಹೆಚ್ಚಿಸುವ, ಕೆಲವು ಇಲಾಖೆಗಳ/ ವೃಂದಗಳ ವಿಲೀನ, ಸಿಬ್ಬಂದಿ ನೇಮಕಾತಿ ಪ್ರಾಧಿಕಾರದ ಸ್ಥಾಪನೆ, ತರಬೇತಿ ಕೇಂದ್ರಗಳ ಸ್ಥಾಪನೆ, ಹೊಸ ವೃಂದಗಳ ರಚನೆ ಇತ್ಯಾದಿ ಆಡಳಿತ ಸುಧಾರಣಾ ವಿಷಯಗಳ ಬಗ್ಗೆ ಶಿಫಾರಸ್ಸುಗಳನ್ನು ಮಾಡಿರುತ್ತದೆ.

ಆಯೋಗದ 1 ಮತ್ತು 2ನೇ ಸಂಪುಟದ ವರದಿಗಳಲ್ಲಿನ ಶಿಫಾರಸ್ಸುಗಳನ್ನು ಪರಿಶೀಲಿಸಿದ ಸರ್ಕಾರವು ಅವುಗಳನ್ನು ಮೇಲೆ (6) ರಿಂದ (8)ರಲ್ಲಿ ಓದಲಾದ ದಿನಾಂಕ: 11-01-2019ರ ಆದೇಶಗಳಲ್ಲಿ ಕೆಲವು ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಿ ಆದೇಶ ಹೊರಡಿಸಲಾಗಿರುತ್ತದೆ. ಜಿಲ್ಲಾ / ವಿಭಾಗೀಯ ಮಟ್ಟದಲ್ಲಿ

ತರಬೇತಿ ಕೇಂದ್ರಗಳ ಸ್ಥಾಪನೆಯೂ ಸೇರಿದಂತೆ, ಆಯ್ಕೆ ದರ್ಜೆ ಪ್ರಾಂಶುಪಾಲರ ವೃಂದದ ಸೃಜನೆ, ವೇತನ ಎತ್ತರಿಕೆ, ಸ್ವಯಂ ನಿವೃತ್ತಿಯ ಕನಿಷ್ಠ ಅರ್ಹತಾದಾಯಕ ಸೇವೆಯನ್ನು 10 ವರ್ಷಗಳಿಗೆ ಇಳಿಸುವ ಮುಂತಾದ ಕೆಲವು ಶಿಫಾರಸ್ಸುಗಳನ್ನು ಸರ್ಕಾರವು ಒಪ್ಪಿರುವುದಿಲ್ಲ.

ರಾಜ್ಯ ಸರ್ಕಾರಿ ನೌಕರರಿಗೆ 2ನೇ ಶನಿವಾರದ ಜೊತೆಗೆ 4ನೇ ಶನಿವಾರವನ್ನು ರಜಾ ದಿನವೆಂದು ಘೋಷಿಸಿ ನೌಕರರ ರಜಾ ದಿನಗಳನ್ನು ಕ್ರಮಬದ್ಧಗೊಳಿಸುವ ಕುರಿತಂತೆ 2ನೇ ಸಂಪುಟದಲ್ಲಿನ ಶಿಫಾರಸ್ಸನ್ನು, ಸಚಿವ ಸಂಪುಟ ಉಪ ಸಮಿತಿಯ ಪರಿಶೀಲನೆಗೆ ವಹಿಸಲಾಗಿರುತ್ತದೆ. ಮುಂದುವರೆದು, 2ನೇ ಸಂಪುಟದ ವರದಿಯಲ್ಲಿ ಆಯೋಗವು ಸರ್ಕಾರದ ವಿವಿಧ ಇಲಾಖೆಗಳ 66 ವಿವಿಧ ವೃಂದಗಳ ವೇತನ ಶ್ರೇಣಿಯನ್ನು ಮೇಲ್ದರ್ಜೆಗೇರಿಸುವ ಹಾಗೂ ಕೆಲವು ವೃಂದಗಳಿಗೆ ನೂತನವಾಗಿ ಭತ್ಯೆಗಳನ್ನು ಮಂಜೂರು ಮಾಡುವ ಶಿಫಾರಸ್ಸುಗಳನ್ನು ಪರಿಶೀಲಿಸಿದ ಸರ್ಕಾರವು, ಮೇಲೆ (9)ರಲ್ಲಿ ಓದಲಾದ ದಿನಾಂಕ: 28-05-2019ರ ಸರ್ಕಾರಿ ಆದೇಶದಲ್ಲಿ, ನಮೂದಿಸಿರುವ ಕೆಲವು ವೃಂದಗಳ ವೇತನ ಶ್ರೇಣಿಯನ್ನು ಮೇಲ್ದರ್ಜೆಗೇರಿಸುವ ಶಿಫಾರಸ್ಸನ್ನು ತಿರಸ್ಕರಿಸಿದ್ದು, ಉಳಿದ ವೃಂದಗಳ ವೇತನ ಶ್ರೇಣಿಗಳ ಹೆಚ್ಚಳ ಮತ್ತು ಭತ್ಯೆಗಳ ಮಂಜೂರಾತಿ ವಿಷಯವನ್ನು ಅಧಿಕಾರಿ ಸಮಿತಿಯ ಸಮಗ್ರ ಪರಿಶೀಲನೆಗೆ ವಹಿಸಲು ಆದೇಶಿಸಲಾಗಿರುತ್ತದೆ.

ರಾಜ್ಯ ಸರ್ಕಾರಿ ನೌಕರರ / ಇಲಾಖೆಗಳ ಕಾರ್ಯಕ್ಷಮತೆ ಉತ್ತಮಪಡಿಸುವಿಕೆ, ವೃಂದಗಳ / ಇಲಾಖೆಗಳ ವಿಲೀನ ಇತ್ಯಾದಿ ಆಡಳಿತ ಸುಧಾರಣಾ ವಿಷಯಗಳ ಬಗ್ಗೆ 2ನೇ ಸಂಪುಟದಲ್ಲಿನ ಆಯೋಗದ ಶಿಫಾರಸ್ಸನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡ ಆದೇಶವನ್ನು ಹೊರಡಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 36 ಎಸ್‌ಆರ್‌ಪಿ 2018, ಬೆಂಗಳೂರು, ದಿನಾಂಕ: 29ನೇ ಮೇ 2019.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 6ನೇ ರಾಜ್ಯ ವೇತನ ಆಯೋಗದ 2ನೇ ಸಂಪುಟದಲ್ಲಿನ ಒಟ್ಟಾರೆ ಶಿಫಾರಸ್ಸುಗಳ ಪೈಕಿ ಈಗಾಗಲೇ ಸರ್ಕಾರದ ನಿರ್ಧರಿತ ಪ್ರಕರಣಗಳನ್ನು ಹೊರತುಪಡಿಸಿ **"ನಿರ್ದಿಷ್ಟ ವೃಂದಗಳ ವೇತನ ಶ್ರೇಣಿಗಳ ಪರಿಷ್ಕರಣೆ ಮತ್ತು ಭತ್ಯೆಗಳ ಮಂಜೂರಾತಿ, ಸರ್ಕಾರದ ವಿವಿಧ ಇಲಾಖೆಗಳ ಮತ್ತು ನೌಕರರ ಕಾರ್ಯಕ್ಷಮತೆಯನ್ನು ಉತ್ತಮಪಡಿಸುವ ಶಿಫಾರಸ್ಸುಗಳೂ ಸೇರಿದಂತೆ ಹಲವು ಆಡಳಿತಾತ್ಮಕ ಸುಧಾರಣೆಗಳ ಕುರಿತ ಶಿಫಾರಸ್ಸುಗಳ ಸಮಗ್ರ ಪರಿಶೀಲನೆಗಾಗಿ** ಈ ಕೆಳಕಂಡ ಅಧಿಕಾರಿಗಳನ್ನು ಒಳಗೊಂಡ **"ಅಧಿಕಾರಿಗಳ ಸಮಿತಿ"** ಯನ್ನು ರಚಿಸಲು ಸರ್ಕಾರವು ಹರ್ಷಿಸುತ್ತದೆ :-

| | | |
|---|---|---|
| 1. | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ | – ಅಧ್ಯಕ್ಷರು |
| 2. | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ | – ಸದಸ್ಯರು |
| 3. | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಸಿ.ಆ.ಸು. ಇಲಾಖೆ (ಆಡಳಿತ ಸುಧಾರಣೆ) | – ಸದಸ್ಯರು |
| 4. | ಸರ್ಕಾರದ ಕಾರ್ಯದರ್ಶಿ, ಸಿ.ಆ.ಸು. ಇಲಾಖೆ, | – ಸದಸ್ಯರು |
| 5. | ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ) | – ಸದಸ್ಯ ಕಾರ್ಯದರ್ಶಿ |

2. ಅಧಿಕಾರಿ ಸಮಿತಿಯ ಪರಿಶೀಲನಾರ್ಹ ಅಂಶಗಳು ಈ ಕೆಳಕಂಡಂತಿರುತ್ತವೆ:–

ಅ) 6ನೇ ರಾಜ್ಯ ವೇತನ ಆಯೋಗವು ಸರ್ಕಾರಕ್ಕೆ ಸಲ್ಲಿಸಿರುವ 2ನೇ ಸಂಪುಟದ ವರದಿಯಲ್ಲಿನ ರಾಜ್ಯ ಸರ್ಕಾರವು ಪರಿಗಣಿಸದ ಶಿಫಾರಸ್ಸುಗಳನ್ನು ಪರಿಶೀಲಿಸಿ, ಕಾರ್ಯಸಾಧ್ಯವಿರುವ ಸುಧಾರಣೆಗಳನ್ನು ಸಲಹೆ ಮಾಡುವುದು.

ಆ) ಸರ್ಕಾರವು ವಹಿಸಬಹುದಾದ ಇನ್ನಿತರೆ ವಿಷಯಗಳನ್ನು ಸಹ ಪರಿಶೀಲಿಸಿ, ಕಾರ್ಯಸಾಧ್ಯವಿರುವ ಶಿಫಾರಸ್ಸುಗಳನ್ನು ಮಾಡುವುದು.

3. ಸಮಿತಿಯು ತನ್ನದೇ ಆದ ಕಾರ್ಯ ವಿಧಾನಗಳನ್ನು ರೂಪಿಸಿಕೊಳ್ಳುವುದು ಹಾಗೂ ಪರಿಶೀಲನಾರ್ಹ ಅಂಶಗಳಿಗೆ ಅಗತ್ಯವೆನಿಸಿದ ಮಾಹಿತಿಗಳನ್ನು ಸರ್ಕಾರದ ವಿವಿಧ ಇಲಾಖೆಗಳಿಂದ/ಲಭ್ಯ ಮೂಲಗಳಿಂದ ಪಡೆದುಕೊಳ್ಳುವುದು.

4. ಸರ್ಕಾರದ ಎಲ್ಲಾ ಇಲಾಖೆಗಳು/ಸಂಸ್ಥೆಗಳು ಸಮಿತಿಯು ಅಪೇಕ್ಷಿಸುವ ಮಾಹಿತಿಗಳನ್ನು ಮತ್ತು ನೆರವನ್ನು ನೀಡಲು ಸಂಪೂರ್ಣ ಸಹಕಾರ ನೀಡುತ್ತವೆ ಎಂದು ಸರ್ಕಾರವು ಭಾವಿಸುತ್ತದೆ.

5. ಸಮಿತಿಯು ತನ್ನ ವರದಿಯನ್ನು ಆದಷ್ಟು ಶೀಘ್ರದಲ್ಲಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ**

**(ಡಿ.ಎಸ್.ಜೋಗೋಜಿ)**
**ಸರ್ಕಾರದ ಉಪ ಕಾರ್ಯದರ್ಶಿ**
**ಆರ್ಥಿಕ ಇಲಾಖೆ (ಸೇವೆಗಳು–2)**

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
3. ರಾಜ್ಯಪಾಲರ ವಿಶೇಷ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
5. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
6. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್‌ರಸ್ತೆ, (ಪಿ.ಬಿ. ನಂ.5329) ಬೆಂಗಳೂರು.
7. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿಕಟ್ಟಡ, ಬೆಂಗಳೂರು.
8. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.

9. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
10. ಸರ್ಕಾರದ ಉಪ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ.
11. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ವಿಧಾನಸೌಧ, ಬೆಂಗಳೂರು.
12. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
13. ಎಲ್ಲಾ ಇಲಾಖಾ ಮುಖ್ಯಸ್ಥರು/ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
14. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
15. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ವಿ.ವಿ.ಗೋಪುರ, ಬೆಂಗಳೂರು-1.
16. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
17. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145'A', ಬಹುಮಹಡಿಗಳ ಕಟ್ಟಡ, ಬೆಂಗಳೂರು.
18. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
19. ಅಧ್ಯಕ್ಷರು, ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘ(ರಿ), ಕಬ್ಬನ್ ಉದ್ಯಾನವನ, ಬೆಂಗಳೂರು.
20. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
21. ವಾರಪತ್ರ /ಶಾಖೆಯ ರಕ್ಷಾಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲ ತಾಣ www.finance.kar.nic.in** ವೀಕ್ಷಿಸಿ.